ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) : ಮಾನ್ಯ ಅಧ್ಯಕ್ಷರೆ, ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ 5 ನೇ ಪಟ್ಟಿಯಲ್ಲಿರುವ 139 ಪ್ರಶ್ನೆಗಳ ಪೈಕಿ 85 ಪ್ರಶ್ನೆಗಳಿಗೆ ಲಿಖಿತಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದಿಡುತ್ತೇನೆ.

ಗ್ರಾಮಂತರ ಪ್ರದೇಶದ ಜನರಿಗೆ ಸಂಪರ್ಕ ವ್ಯವಸ್ಥೆ

440 - ಶ್ರೀ ಎಸ್. ಅಂಗಾರ (ಸೂಳ್ಯ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ?

ಅ) ಸೂಳ್ಯ ತಾಲ್ಲೂಕು ಕೇಂದ್ರದಿಂದ ಗ್ರಾಮಾಂತರ ಪ್ರದೇಶಗಳಿಗೆ ಹೋಗಿ ಬರಲು ಸರಿಯಾಗಿ ಸಾರಿಗೆ ವ್ಯವಸ್ಥೆ ಇಲ್ಲದೆ ಇರುವುದು ನಿಜವೆ? ಸೂಳ್ಯ ಬಸ್ಸು ನಿಲ್ದಾಣ ಹಾಗೂ ಡಿಪೋ ರಚಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ ಹಾಗಿದ್ದಲ್ಲಿ ಯಾವಾಗ ಮಾಡಲಾಗುವುದು (ವಿವರ ನೀಡುವುದು)

ಆ) ಸೂಳ್ಯ ತಾಲ್ಲೂಕಿನ ಪವಿತ್ರ ಪುಣ್ಯ ಕ್ಷೇತ್ರವಾದ ಕುಕ್ಕೆ ಶ್ರೀ ಸುಬ್ರಹ್ಮಣ್ಯದಲ್ಲಿ ಸರಿಯಾದ ಬಸ್ ನಿಲ್ದಾಣವಿಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಹಾಗಿದ್ದಲ್ಲಿ ನಿಲ್ದಾಣ ನಿರ್ಮಾಣಕ್ಕೆ ಕೈಗೊಳ್ಳಲಾದ ಕ್ರಮವೇನು?

ಶ್ರೀ ಸಿ.ಆರ್. ಸಗೀರ್ ಅಹಮದ್ (ಸಾರಿಗೆ ಸಚಿವರು) :

ಅ) ಇಲ್ಲ. ಸೂಳ್ಯ ತಾಲ್ಲೂಕು ಕೇಂದ್ರದಿಂದ ಗ್ರಾಮಾಂತರ ಪ್ರದೇಶಗಳಿಗೆ ಜನರಿಗೆ ಹೋಗಿ ಬರಲು ಸಾಕಷ್ಟು ಸಾರಿಗೆ ವ್ಯವಸ್ಥೆ ಮಾಡಲಾಗಿದೆ.

ಸೂಳ್ಯದಲ್ಲಿ ಹಾಲಿ ಇರುವ ನಿಲ್ದಾಣದ ಕಟ್ಟಡದಲ್ಲಿ ಕನಿಷ್ಠ ಮೂಲಭೂತ ಸೌಕರ್ಯವನ್ನು ಒದಗಿಸಿ ಬಸ್ ನಿಲ್ದಾಣದ ಸೌಕರ್ಯವನ್ನು ಒದಗಿಸಿಕೊಡಲಾಗಿದೆ. ಡಿಪೋ ನಿರ್ಮಿಸುವ ಉದ್ದೇಶ ಇದೆ.

ಆ) ಬಂದಿದೆ.

ಈ ಕ್ಷೇತ್ರದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡುವ ಕಾಮಗಾರಿಗೆ ತಾಂತ್ರಿಕ ಮಂಜೂರಾತಿ ನೀಡಿ ಟೆಂಡರ್ ಮೂಲಕ ಕೆಲಸ ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕೊಡಗು ಜಿಲ್ಲೆಯಲ್ಲಿ ಅಂಗವಿಕಲರಿಗೆ ಅರ್ಹತಾ ಧೃಢೀಕರಣ ಪತ್ರ ನೀಡುವಲ್ಲಿ ಆಗುತ್ತಿರುವ ವಿಳಂಬ

441 - ಶ್ರೀ ಅಪ್ಪಚ್ಚು ರಂಜನ್ ಎಂ.ಪಿ (ಸೋಮವಾರ ಪೇಟೆ) : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಡಗು ಜಿಲ್ಲೆಯಲ್ಲಿರುವ ಅಂಗವಿಕಲರ ಸಂಖ್ಯೆ ಒಟ್ಟು ಎಷ್ಟು? ಅಂಗವಿಕಲರು ಅಂಥ